# 2 ನೇ ಹೆಚ್ಚುವರಿ ಪ್ರಥಮ ದರ್ಜೆಯ  ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು.

**ಓ ಎಸ್ ನಂ.223-2018** **ಪಿ . ಡಬ್ಲುಃ 1**

| | |
|---|---|
| ಸಾಕ್ಷಿದಾರರ ಹೆಸರು ವಾಸ್ತವ್ಯ | ಎಂ.ಮಾದಯ್ಯ ಉ ಮುದ್ದಯ್ಯ, ಉ ಮುದ್ದು ಮಾದಯ್ಯ<br>ಅಳಗಂಚಿ ಗ್ರಾಮ,  ನಂಜನಗೂಡು ತಾ. |
| | **ಸತ್ಯ ಪ್ರತಿಜ್ಞೆಯ** ಮೇರೆಗೆ **ದಿನಾಂಕ** 05-10-2023. |

**ಮುಂದುವರೆದ ಪಾಟೀ ಸವಾಲುಃ ಪ್ರತಿವಾದಿಗ ಪರ ಶ್ರೀ ಹೆಚ್.ಪಿ.ಎನ್  ವಕೀಲರಿಂದಃ**

5. ನಿಪಿ-5 ಅಳಗಂಚಿ ಗ್ರಾಮದ ಸರ್ವೇ ನಂಬರುಗಳಿಗೆ ಸಂಬಂಧಿಸಿದ ದಾಖಲೆ ಆಗಿರುತ್ತದೆ ಎಂದರೆ ಸರಿ. ನ್ಯಾಯಾಲಯದ ಆದೇಶದಂತೆ 3 ಜನ ಹೆಸರಿಗೆ ಖಾತೆ ಆಗಿರುತ್ತದೆ ಎಂದರೆ ಸರಿಯಲ್ಲ. ನಿಪಿ-5 ರಂತೆ ನ್ಯಾಯಾಲಯದ ಅದೇಶದ ಮೇರೆಗೆ 3 ಜನ ಹೆಸರಿಗೆ ಖಾತೆ ಆಗಿದ್ದರೂ ಸಹ ಖಾತೆ ಆಗಿರುವುದಿಲ್ಲ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ-9 ರಂತೆ ಸರ್ವೆ ನಂಬರ್ 135/1 ರ ವಿಸ್ತೀರ್ಣ 1 ಎಕರೆ 33 ಗುಂಟೆ ಸ್ವತ್ತಿಗೆ ಸಂಬಂಧಿಸಿದಂತೆ ನನ್ನ ಹೆಸರಿಗೆ ಖಾತೆ ಆಗಿರುತ್ತದೆ ಎಂದರೆ ಸರಿ. ದಾವಾ ಷೆಡ್ಯೂಲ್ ಸರ್ವೆ ನಂಬರ್ 201/3 ನನ್ನ ತಾಯಿಯವರ ಹೆಸರಿಗೆ 2011-12 ರಲ್ಲಿ ಪೌತಿ ಖಾತೆ ಆಗಿರುತ್ತದೆ ಎಂದರೆ ಸರಿ. ನನ್ನ ತಾಯಿಯವರ ಹೆಸರಿಗೆ ಖಾತೆ ಆದ ದಿನದಿಂದಲೂ ದಾವಾ ಷೆಡ್ಯೂಲ್ ಸರ್ವೆ ನಂಬರ್ 201/3 ಸ್ವಾಧೀನದಲ್ಲಿ ಇದ್ದರು ಎಂದರೆ ಸರಿಯಲ್ಲ. ದಾವಾ ಷೆಡ್ಯೂಲ್ ಸ್ವತ್ತಿನಲ್ಲಿ ಪ್ರತಿವಾದಿ-1,2 ಮತ್ತು 4 ರವರು ಸ್ವಾಧೀನದಲ್ಲಿ ಇದ್ದರೂ ಸಹ ಇಲ್ಲ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

6.ನಾನು ಹೇಳುವಂತೆ ದಿ.26-11-2016 ರಂದು ಗ್ರಾಮದಲ್ಲಿ ನಡೆದ ಪಂಚಾಯ್ತಿಯಲ್ಲಿ ಸರ್ವೆ ನಂ.135 ರ ವಿಸ್ತೀರ್ಣ 1 ಎಕರೆ 14 ಗುಂಟೆ ಸ್ವತನ್ನು ಪ್ರತಿವಾದಿಗಳಿಗೆ ಬಿಟ್ಟು ಕೊಡುವುದಾಗಿ ಒಪ್ಪಿದ್ದೆನು ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅದೇ ರೀತಿ ಪ್ರತಿವಾದಿಗಳ ಸ್ವಾಧೀನದಲ್ಲಿ ಇದ್ದ ದಾವಾ ಸ್ವತ್ತನ್ನು ನನಗೆ ಬಿಟ್ಟುಕೊಡುವುದಾಗಿ

ಮಾತುಕತೆ ಆಗಿತ್ತು ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಹೇಳುವಂತೆ ಯಾವುದೇ ಪಂಚಾಯ್ತಿ ಆಗಿರುವುದಿಲ್ಲ, ಪಂಚಾಯ್ತಿಯಲ್ಲಿ ವಿಭಾಗವಾಗಿರುವುದಿಲ್ಲ ಎಂದರೆ ಸರಿಯಲ್ಲ. ಪಂಚಾಯ್ತಿ ವಿಭಾಗ ಪತ್ರವನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದೀರಾ ಎಂಬ ಪ್ರಶ್ನೆಗೆ ಸಾಕ್ಷಿ ಎಲ್ಲಾ ದಾಖಲೆಗಳು ಪ್ರತಿವಾದಿಗಳ ಬಳಿಯೇ ಇರುತ್ತವೆ ಎಂದು ನುಡಿಯುತ್ತಾರೆ. ಯಾವುದೇ ದಾಖಲೆಗಳು ಪ್ರತಿವಾದಿಗಳ ಬಳಿ ಇಲ್ಲದೇ ಇದ್ದರೂ ಸಹ ಈ ಪ್ರಕರಣವನ್ನು ದಾಖಲಿಸುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ದುರುದ್ದೇಶದಿಂದ ಪ್ರತಿವಾದಿಗಳ ಸ್ವಾಧೀನದಲ್ಲಿ ಇರುವ ಸ್ವತ್ತನ್ನು ಅಕ್ರಮವಾಗಿ ಖಸಿದುಕೊಳ್ಳಬೇಕೆಂಬ ಉದ್ದೇಶದಿಂದ ಈ ದಾವಾವನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ನಿಪಿ-3 ರ ಪ್ರಕಾರ 2011 ರಿಂದಲೂ 1 ನೇ ಪ್ರತಿವಾದಿಯೇ ದಾವಾ ಷೆಡ್ಯೂಲ್ ಸ್ವತ್ತಿನ ಸ್ವಾಧೀನದಲ್ಲಿ ಇರುತ್ತಾರೆ ಎಂದರೆ ಸರಿಯಲ್ಲ. ದಿ.09-03-2017 ರಂದು 1 ನೇ ಪ್ರತಿವಾದಿವರು ಕಾನೂನು ಬದ್ಧವಾಗಿ 2 ನೇ ಪ್ರತಿವಾದಿ ಹೆಸರಿಗೆ ದಾನ ಪತ್ರ ಮಾಡಿದ್ದು, ಸದರಿ ದಾನ ಪತ್ರದಂತೆ 2 ನೇ ಪ್ರತಿವಾದಿ ಹೆಸರಿಗೆ ದಾವಾ ಷೆಡ್ಯೂಲ್ ಸ್ವತ್ತಿನ ಖಾತೆಯೂ ಬದಲಾವಣೆ ಆಗಿರುತ್ತದೆ ಎಂದರೆ ಸರಿಯಲ್ಲ. ಕಾನೂನು ಬದ್ಧವಾಗಿ ಆದ ದಾನ ಪತ್ರದ ಆಧಾರದ ಮೇರೆಗೆ 2 ನೇ ಪ್ರತಿವಾದಿ ತನ್ನ ಹೆಸರಿಗೆ ಖಾತೆ ಬದಲಾವಣೆ ಮಾಡಿಕೊಂಡು ಅವರೇ ಸ್ವಾಧೀನದಲ್ಲಿ ಇರುತ್ತಾರೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ನಾನು ಸ್ವಾಧೀನದಲ್ಲಿ ಇರುತ್ತೇನೆ ಎಂದು ನುಡಿಯುತ್ತಾರೆ. ನಾನು ದಾವಾ ಷೆಡ್ಯೂಲ್ ಸ್ವತ್ತಿನ ಸ್ವಾಧೀನದಲ್ಲಿ ಇಲ್ಲದೇ ಇದ್ದರೂ ಸಹ 2 ನೇ ಪ್ರತಿವಾದಿ ಹೆಸರಿಗೆ ಖಾತೆ ಬದಲಾವಣೆ ಆಗಿರುವುದರಿಂದ ನಾನೇ ಸ್ವಾಧೀನದಲ್ಲಿ ಇರುತ್ತೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. 2 ನೇ ಪ್ರತಿವಾದಿಯವರ ಹೆಸರಿಗೆ ಖಾತೆ ಆಗಿರುವ ದಾಖಲೆಯನ್ನು ನಾನು ನಿಪಿ-7 ರಂತೆ ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ ಎಂದರೆ ಸಾಕ್ಷಿ ಎಲ್ಲಾ ದಾಖಲೆಗಳು ಪ್ರತಿವಾದಿಗಳ ಬಳಿ ಇರುತ್ತವೆ ಎಂದು ನುಡಿಯುತ್ತಾರೆ. 2 ನೇ ಪ್ರತಿವಾದಿ ಹೆಸರಿಗೆ ದಾವಾ ಷೆಡ್ಯೂಲ್ ಸ್ವತ್ತಿನ ಖಾತೆ ಬದಲಾವಣೆ ಆದ ನಂತರ ದಾವಾ ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ಕಂದಾಯ ವಗೈರೆಯನ್ನು ಪಾವತಿ ಮಾಡುತ್ತಾ ಬಂದಿರುತ್ತಾರೆ ಎಂದರೆ ಸರಿಯಲ್ಲ. ಪ್ರತಿವಾದಿ-2 ಮತ್ತು 4 ರವರು ಎಂದಿಗೂ ದಾವಾ ಷೆಡ್ಯೂಲ್ ಸ್ವತ್ತನ್ನು ನನಗೆ ಬಿಟ್ಟುಕೊಟ್ಟಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಹೇಳುವಂತೆ ಸರ್ವೇ ನಂಬರ್ 135 ರ ಜಮೀನನ್ನು ಪ್ರತಿವಾದಿಗಳಿಗೆ ಬಿಟ್ಟುಕೊಟ್ಟಿರುವುದಿಲ್ಲ ಹಾಗೂ ಪ್ರತಿವಾದಿ-2 ಮತ್ತು 4 ರವರು ನನಗೆ ದಾವಾ ಷೆಡ್ಯೂಲ್ ಸ್ವತ್ತನ್ನು ಬಿಟ್ಟುಕೊಟ್ಟಿರುವುದಿಲ್ಲ ಎಂದರೆ ಸರಿಯಲ್ಲ. ಪಂಚಾಯ್ತಿಯಲ್ಲಿ ಆದ ತೀರ್ಮಾನದಂತೆ ನಾನು ಮತ್ತು ಪ್ರತಿವಾದಿಗಳು

ಯಾವುದೇ ಜಮೀನನ್ನು ಅದಲು-ಬದಲು ಮಾಡಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಪ್ರತಿವಾದಿಗಳು ಜಮೀನನ್ನು ಅದಲು-ಬದಲು ಮಾಡಿಕೊಂಡಿರುವುದರಿಂದ ದಾವಾ ಷೆಡ್ಯೂಲ್ ಸ್ವತ್ತು ನಮಗೆ ಸೇರಿದ್ದಾಗಿರುತ್ತದೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ದಾವಾ ಷೆಡ್ಯೂಲ್ ಸ್ವತ್ತಿನ ಮೇಲೆ ಯಾವುದೇ ಹಕ್ಕಾಗಲಿ, ಹಿತಾಸಕ್ತಿಯಾಗಲಿ ಹಾಗೂ ಒಡೆತನವಾಗಲಿ ಇರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಷೆಡ್ಯೂಲ್ ಸ್ವತ್ತು 2 ನೇ ಪ್ರತಿವಾದಿಗೆ ಸೇರಿದ್ದಾಗಿರುತ್ತದೆ ಎಂದರೆ ಸರಿಯಲ್ಲ. ಸರ್ವೇ ನಂಬರ್ 135 ರ ಸ್ವತ್ತಿಗೂ ಪ್ರತಿವಾದಿಗಳಿಗೂ ಯಾವುದೇ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ. ನಾನು ಪ್ರತಿವಾದಿಗಳ ಸ್ವತ್ತಿಗೆ ಅತಿಕ್ರಮ ಪ್ರವೇಶ ಮಾಡಿ ದಬ್ಬಾಳಿಕೆ ಮಾಡಿ ಹಲ್ಲೇ ಮಾಡಿರುತ್ತೇನೆ ಎಂದರೆ ಸರಿಯಲ್ಲ. ದಾವಾ ಷೆಡ್ಯೂಲ್ ಸ್ವತ್ತು 2 ನೇ ಪ್ರತಿವಾದಿಗೆ ಸೇರಿದ್ದಾಗಿರುತ್ತದೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**ಸಹಿ/-**

**ಕಿ.ಪ್ರ.ದ. ನ್ಯಾ ದಂ. ನಂಜನಗೂಡು**